# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ:22-12-2021 ರಂದು ಬೆಳಿಗ್ಗೆ:- 11:00 ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೇಗೂರು ವಾರ್ಡ್ ಸಂಖ್ಯೆ-192 ರ ವಾರ್ಡ್ ಸಮಿತಿ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ರವರ ಸಮ್ಮುಖದಲ್ಲಿ ಅವರ ಅನುಮತಿಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು.

ಪ್ರಾರಂಭದಲ್ಲಿ ವಾರ್ಡ್ ಸಮಿತಿ ಕಾರ್ಯದರ್ಶಿ ಶ್ರೀ.ಚಲುವರಾಜು.ಎಸ್. ಕಿರಿಯ ಅಭಿಯಂತರರು, ವಾರ್ಡ್ ಸಂಖ್ಯೆ-192 ಬೇಗೂರು ರವರು ಸಭೆಗೆ ಹಾಜರಾಗಿದಂತಹ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಹಾಗೂ ಇತರರನ್ನು ಸ್ವಾಗತಿಸಿ ಕಾರ್ಯಕ್ರಮ ಪ್ರಾರಂಭಿಸಿದರು.

**ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:**

1. ಕೋವಿಡ್-19 ಮಹಾಮಾರಿ ಸಾಂಕ್ರಮಿಕ ರೋಗ ಹರಡದಂತೆ ಮುಂಜಾಗ್ರತವಾಗಿ ತೆಗೆದುಕೊಳ್ಳಬಹುದಾದ ಕ್ರಮಗಳು.
2. ವಿಪತ್ತು ನಿರ್ವಹಣಾ ಸಮಿತಿ (Disaster Management Committee) ನಿರ್ವಹಿಸಬೇಕಾದ ಕ್ರಮಗಳ ಕುರಿತು.
3. ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವುದು.
4. ವಾರ್ಡ್‌ನ ಕುಂದುಕೊರತೆಗಳ ಬಗ್ಗೆ ಚರ್ಚಿಸುವುದು.
5. ಮುಂಗಾರು ಮಳೆಯಿಂದ ಸಂಭವಿಸಿದ/ಸಂಭವಿಸಬಹುದಾದ ಅನಾಹುತಗಳ ಕುರಿತು ಕ್ರಮ ಕೈಗೊಳ್ಳುವ ಬಗ್ಗೆ ಚರ್ಚಿಸುವುದು.

**ವಾರ್ಡ್ ನಂ 192 ವಾರ್ಡ್ ಸಮಿತಿ ಸಭೆಯಲ್ಲಿ ಹಾಜರಿದ್ದವರು**

| ಕ್ರ.ಸಂ | ಹೆಸರು | ಹುದ್ದೆ | |
|---|---|---|---|
| 1 | ಶ್ರೀ.ನೀಲಕಂಠಯ್ಯ.ಕೆ.ಪಿ. | ಅಧ್ಯಕ್ಷರು/ನೋಡೆಲ್ ,ಅಧಿಕಾರಿಗಳು | 9845989978 |
| 2 | ಶ್ರೀ.ಚಲುವರಾಜು.ಎಸ್. | ಕಾರ್ಯದರ್ಶಿ (ಕಿ.ಅ.) | 9620687103 |
| 3 | ಶ್ರೀ.ಸುನಿಲ್ ಕುಮಾರ್ | ಬೆಸ್ಕಾಂ. ಸ.ಕಾ.ಅ. | 9449844670 |
| 4 | ಶ್ರೀ.ರಮೇಶ್ | ಸ.ಕಾ.ಅ. ಬೀದಿ ದೀಪ ಇಲಾಖೆ | 9986835425 |
| 5 | ಶ್ರೀ.ಜಯಪ್ರಕಾಶ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ | |
| 6 | ಶ್ರೀಮತಿ.ರೇಷ್ಮಾ | ಕೆರೆ ವಿಭಾಗ | |
| 7 | ಶ್ರೀ.ರಮೇಶ್.ಎಲ್. | ಕಿ.ಆ.ಪ. | 9902785690 |
| 8 | ಶ್ರೀ.ಶ್ರೀಧರ್.ಎಸ್. | ಹಿ.ಆ.ಪ | 9739453414 |
| 9 | ಶ್ರೀಮತಿ.ಮಂಜುಳ | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ | |
| 10 | ಶ್ರೀ.ರಮೇಶ್ | ಸಧಸ್ಯರು | |
| 11 | ಶ್ರೀ.ಶಶಿಧರ | ಸಾರ್ವಜನಿಕರು | 9591813829 |
| 12 | ಶ್ರೀ.ಸುರೇಶ.ಪಿ.ವಿ | ಸಾರ್ವಜನಿಕರು | 9343683060 |
| 13 | ಶ್ರೀ.ಜಿ.ಸಿ.ಶಂಕರ್ | ಸಾರ್ವಜನಿಕರು | 9900108288 |
| 14 | ಶ್ರೀ.ಬಿ.ಅಚ್ಯುತ್ ರಾವ್ | ಸಾರ್ವಜನಿಕರು | 97411622366 |

| | | | |
|---|---|---|---|
| 15 | ಶ್ರೀ.ಗಿರಿ ಪ್ರಸಾದ್ | ಸಾರ್ವಜನಿಕರು | 9008544994 |
| 16 | ಶ್ರೀಮತಿ.ಆಶಾ ನಾಯಕ್ | ಸಾರ್ವಜನಿಕರು | 9740439240 |
| 17 | ಶ್ರೀಮತಿ.ಬಿ.ಜಿ.ಸೌಮ್ಯ ಪ್ರಿಯಾ | ಸಾರ್ವಜನಿಕರು | 9060104489 |
| 18 | ಶ್ರೀ.ನಂದೀಶ ನಾಗರಾಜ್ | ಸಾರ್ವಜನಿಕರು | 9036551572 |
| 19 | ಶ್ರೀಮತಿ.ದಮಯಂತಿ | ಸಾರ್ವಜನಿಕರು | 8073276764 |
| 20 | ಶ್ರೀ.ಸಾಕ್ಷಿ ಮಧು | ಸಾರ್ವಜನಿಕರು | 9538206605 |

## ಸಭೆಯ ನಡವಳಿಗಳು

1. ಪ್ರಪ್ರಥಮವಾಗಿ ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ರೋಗದ ಬಗ್ಗೆ ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ಚರ್ಚಿಸಿದರು. ಕೋವಿಡ್-19 ಸಂಬಂಧ ಹಾಗೂ ಒಮಿಕ್ರಾನ್ ಎಂಬ ಹೊಸ ವೈರಸ್ ಹರಡುತ್ತಿರುವುದಾಗಿ ಇದರ ಸಂಬಂಧ ಮುಂಜಾಗ್ರತ ಕ್ರಮವಾಗಿ ಸರಿಯಾದ ಸಮಯಕ್ಕೆ ಚುಚ್ಚುಮದ್ದು ಹಾಕಿಸಿಕೊಳ್ಳಲು ಹಾಗೂ ಮಾಸ್ಕ್‌ಗಳನ್ನು ಬಳಸಲು ಮತ್ತು ಅಂತರ ಕಾಪಾಡಿಕೊಳ್ಳಲು ಸಭೆಯಲ್ಲಿ ಸೂಚಿಸಿದರು

2. ವಾರ್ಡ್ ವ್ಯಾಪ್ತಿಯ ವಿಶ್ವಪ್ರಿಯಾ ಬಡಾವಣೆ ಮತ್ತು ಮೈಕೋ ಬಡಾವಣೆಗಳಲ್ಲಿ ಚರಂಡಿಗಳ ಮೇಲೆ ವಿದ್ಯುತ್ ಕಂಭಗಳಿದ್ದು ಇದರಿಂದ ಸಾರ್ವಜನಿಕರಿಗೆ ಮತ್ತು ವಾಹನ ಸಂಚಾರಕ್ಕೆ ತುಂಬಾ ತೊಂದರೆಯಾಗುತ್ತಿರುವುದಾಗಿ ತಕ್ಷಣವೇ ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ಉಪಸ್ಥಿತರಿದ್ದ ಸಾರ್ವಜನಿಕರು ದೂರನ್ನು ಸಲ್ಲಿಸಿದರು ಸದರಿ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

3. ವಾರ್ಡ್ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಜಿಯೋ ಕಂಪನಿ, ಏರ್‌ಟೆಲ್ ಕಂಪನಿಗಳು ರಸ್ತೆಗಳನ್ನು ಅಗೆದು ದುರಸ್ಥಿಗೊಳಿಸದೇ ಹಾಗೆಯೇ ಬಿಟ್ಟಿದ್ದು ಸಾರ್ವಜನಿಕರಿಗೆ ಮತ್ತು ವಾಹನ ಸಂಚಾರಕ್ಕೆ ತುಂಬಾ ತೊಂದರೆಯಾಗುತ್ತಿರುವುದಾಗಿ ತಕ್ಷಣವೇ ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ಉಪಸ್ಥಿತರಿದ್ದ ಸಾರ್ವಜನಿಕರು ದೂರನ್ನು ಸಲ್ಲಿಸಿದರು ಸದರಿ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

4. ವಾರ್ಡ್ ವ್ಯಾಪ್ತಿಯ ಅಕ್ಷಯನಗರ ಬಡಾವಣೆಯಲ್ಲಿ ಕಾವೇರಿ ಕುಡಿಯುವ ನೀರಿನ ಪೈಪ್‌ಲೈನ್ ದುರಸ್ಥಿಯಾಗಿದ್ದು ಸರಿಪಡಿಸಿಕೊಡಬೇಕೆಂದು ಸಭೆಯಲ್ಲಿ ಸದರಿ ಪ್ರದೇಶದ ಜನರು ದೂರಿದರು ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಇದರ ಬಗ್ಗೆ ಕ್ರಮವಹಿಸುವುದಾಗಿ ಹಾಗೂ ಅತೀ ಶೀಘ್ರದಲ್ಲಿ ಪರಿಹರಿಸುವುದಾಗಿ ತಿಳಿಸಿದರು.

5. ವಾರ್ಡ್ ವ್ಯಾಪ್ತಿಯ Elagent Orchid ಅಪಾರ್ಟ್‌ಮೆಂಟ್ ವಾಟರ್ ಟ್ಯಾಂಕರ್‌ಗಳು ಅಕ್ಷಯನಗರ ಪೂರ್ವ ಬಿಡಿಎ ಬಡಾವಣೆಯಲ್ಲಿ ಹೊಸದಾಗಿ ನಿರ್ಮಿಸಲಾದ ರಸ್ತೆಯನ್ನು ಹಾಳು ಮಾಡುತ್ತಿದೆ. ದಯವಿಟ್ಟು ನೀವುಗಳು ಅವರ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳಬೇಕಾಗಿ ವಿನಂತಿಸಿಕೊಂಡರು. ಸರಿಯಾದ ರಸ್ತೆ ನಿರ್ಮಾಣ ಮಾಡಲು ಸದರಿ ಪ್ರದೇಶದ ಸಾರ್ವಜನಿಕರು ಸಭೆಯಲ್ಲಿ ದೂರಿದರು ಈ ಸಮಸ್ಯೆಯ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಸಹಾಯಕ ಅಭಿಯಂತರರಿಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದರು. ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

6. ವಾರ್ಡ್ ವ್ಯಾಪ್ತಿಯ Axis Antara ಅಪಾರ್ಟ್‌ಮೆಂಟ್ ಎದುರು ರಸ್ತೆಯವರು ಒಳಚರಂಡಿ ನೀರು ಶುದ್ಧೀಕರಣಗೊಳಿಸದೇ ಚರಂಡಿಗಳಿಗೆ ಹರಿಯುತ್ತಿದ್ದು ಇವರ ವಿರುದ್ಧ ಕ್ರಮ ಕೈಗೊಳ್ಳಲು ಸಾರ್ವಜನಿಕರು ಸಭೆಯಲ್ಲಿ ದೂರಿದರು ಈ ಸಮಸ್ಯೆಯ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಸಹಾಯಕ ಅಭಿಯಂತರರಿಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದರು. ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

ವಾರ್ಡ್ ವ್ಯಾಪ್ತಿಯ ಅಕ್ಷಯನಗರ ಬಿ.ಡಿ.ಎ. ಬಡಾವಣೆಯ ಸ್ಮಶಾನದ ಜಾಗವನ್ನು ಸರ್ವೆ ಮಾಡಿ ಸದರಿ ಪ್ರದೇಶಕ್ಕೆ ಒಳಚರಂಡಿ ವ್ಯವಸ್ಥೆ ಸರಿಪಡಿಸಿಕೊಡಬೇಕಾಗಿ ದೂರಿದರು. ಸಭೆಯಲ್ಲಿ ಉಪಸ್ಥಿತರಿದ್ದ ಸಹಾಯಕ ಅಭಿಯಂತರರಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

8. ಸದರಿ ವಾರ್ಡ್ ವ್ಯಾಪ್ತಿಯಲ್ಲಿ ಮ್ಯಾನ್‌ಹೋಲ್‌ಗಳು ರಸ್ತೆಯ ತಳಮಟ್ಟದಲ್ಲಿರುವುದರಿಂದ ಅವುಗಳನ್ನು ಎತ್ತರಿಸಲು ಸಾರ್ವಜನಿಕರು ದೂರಿದರು ಸಭೆಯಲ್ಲಿ ಉಪಸ್ಥಿತರಿದ್ದ ಸಹಾಯಕ ಅಭಿಯಂತರರಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

9. ವಾರ್ಡ್ ವ್ಯಾಪ್ತಿಯ ದೊಡ್ಡಕಮ್ಮನಹಳ್ಳಿ ಆಂಜನೇಯ ದೇವಸ್ಥಾನದಿಂದ ನೈಸ್ ರಸ್ತೆಯವರೆಗೆ ರಸ್ತೆಗಳು ಹಾಳಾಗಿರುವುದಾಗಿ ಸಭೆಯಲ್ಲಿ ಉಪಸ್ಥಿತರಿದ್ದ ಸ್ಥಳೀಯ ಸಾರ್ವಜನಿಕರು ದೂರಿದರು ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಸಹಾಯಕ ಅಭಿಯಂತರರಿಗೆ ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

10. ವಾರ್ಡ್ ವ್ಯಾಪ್ತಿಯ ಅಪಾರ್ಟ್‌ಮೆಂಟ್‌ಗಳು ಒಳಚರಂಡಿ ನೀರು ಶುದ್ಧೀಕರಣಗೊಳಿಸದೇ ಚರಂಡಿಗಳಿಗೆ ಬಿಡುತ್ತಿರುವುದಾಗಿ ಎಂದು ಸಭೆಯಲ್ಲಿ ಉಪಸ್ಥಿತರಿದ್ದ ಸ್ಥಳೀಯ ಸಾರ್ವಜನಿಕರು ದೂರಿದರು ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

11. ವಾರ್ಡ್ ವ್ಯಾಪ್ತಿಯಲ್ಲಿ ಜಟ್ಟಿಂಗ್ ಯಂತ್ರಗಳ ಕೊರತೆಯಿರುವುದಾಗಿ ಸಭೆಯಲ್ಲಿ ಉಪಸ್ಥಿತರಿದ್ದ ಸ್ಥಳೀಯ ಸಾರ್ವಜನಿಕರು ದೂರಿದರು ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

12. ವಾರ್ಡ್ ವ್ಯಾಪ್ತಿಯ ಕ್ಲಾಸಿಕ್ ಬಡಾವಣೆಯ ರಸ್ತೆಗಳು ಹಾಳಾಗಿರುವುದಾಗಿ ಸಭೆಯಲ್ಲಿ ಉಪಸ್ಥಿತರಿದ್ದ ಸ್ಥಳೀಯ ಸಾರ್ವಜನಿಕರು ದೂರಿದರು ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಸಹಾಯಕ ಅಭಿಯಂತರರಿಗೆ ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

13. ವಾರ್ಡ್ ವ್ಯಾಪ್ತಿಯ ರಾಘವೇಂದ್ರ ಬಡಾವಣೆಯ ರಸ್ತೆಗಳು ಹಾಳಾಗಿರುವುದಾಗಿ ಸಭೆಯಲ್ಲಿ ಉಪಸ್ಥಿತರಿದ್ದ ಸ್ಥಳೀಯ ಸಾರ್ವಜನಿಕರು ದೂರಿದರು ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಸಹಾಯಕ ಅಭಿಯಂತರರಿಗೆ ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

14. ವಾರ್ಡ್ ವ್ಯಾಪ್ತಿಯ ಸೋಬೋ ರೆಸಿಡೆನ್ಸಿ ಮತ್ತು ಹೊಸ ಬೀದಿಯಲ್ಲಿ ಒಳಚರಂಡಿ ಚರಂಡಿ ನೀರು ಉಕ್ಕಿ ರಸ್ತೆಯಲ್ಲಿ ಹರಿಯುತ್ತಿರುವುದಾಗಿ ಸಭೆಯಲ್ಲಿ ಉಪಸ್ಥಿತರಿದ್ದ ಸ್ಥಳೀಯ ಸಾರ್ವಜನಿಕರು ದೂರಿದರು ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಸಹಾಯಕ ಅಭಿಯಂತರರಿಗೆ ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

15. ವಾರ್ಡ್ ವ್ಯಾಪ್ತಿಯ ಡ್ಯುಯೋ ಹೈಟ್ಸ್ ಬಡಾವಣೆಯಲ್ಲಿ ಒಳಚರಂಡಿ ಚರಂಡಿ ನೀರು ಉಕ್ಕಿ ರಸ್ತೆಯಲ್ಲಿ ಹರಿಯುತ್ತಿರುವುದಾಗಿ ಕಲ್ವರ್ಟ್ ನಿರ್ಮಾಣ ಮಾಡಬೇಕೆಂದು ಸಭೆಯಲ್ಲಿ ಉಪಸ್ಥಿತರಿದ್ದ ಸ್ಥಳೀಯ ಸಾರ್ವಜನಿಕರು ದೂರಿದರು ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಸಹಾಯಕ ಅಭಿಯಂತರರಿಗೆ ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

16. ವಾರ್ಡ್ ವ್ಯಾಪ್ತಿಯ ಚಾಮುಂಡೇಶ್ವರಿನಗರದಲ್ಲಿ ಚರಂಡಿಗಳಲ್ಲಿ ಮಣ್ಣು ತುಂಬಿದ್ದು ಚರಂಡಿ ನೀರು ರಸ್ತೆಯಲ್ಲಿ ಹರಿಯುತ್ತಿರುವುದಾಗಿ ಚರಂಡಿಗಳಲ್ಲಿ ಹೂಳನ್ನು ತೆಗೆದುಹಾಕಿ ಚರಂಡಿ ನೀರು ಸರಾಗವಾಗಿ ಹರಿಯುವಂತೆ ಸಾರ್ವಜನಿಕರಿಗೆ ಮತ್ತು ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ಸಭೆಯಲ್ಲಿ ಉಪಸ್ಥಿತರಿದ್ದ ಸ್ಥಳೀಯ

ಸಾರ್ವಜನಿಕರು ದೂರಿದರು ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಸಹಾಯಕ ಅಭಿಯಂತರರಿಗೆ ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

17. ಮುಂದಿನ ವಾರ್ಡ್ ಕಮಿಟಿ ಸಭೆಗೆ ಎಲ್ಲಾ ಇಲಾಖೆಯ ಅಧಿಕಾರಿಗಳು ಹಾಜರಾಗುವಂತೆ ಸೂಚಿಸಿದರು ತಪ್ಪಿದ್ದಲ್ಲಿ ಮೇಲಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳಲು ಹಾಗೂ ಸೂಕ್ತ ಮಾರ್ಗದರ್ಶನಕ್ಕಾಗಿ ತಿಳಿಸಲಾಗುವುದು ಎಂದು ಮಾನ್ಯ ವಾರ್ಡ್ ಸಮಿತಿ ನೋಡಲ್ ಅಧಿಕಾರಿಗಳು ಸೂಚಿಸಿದರು.

<u>ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.</u>

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ನಂ -192 ಬೇಗೂರು

ಅಧ್ಯಕ್ಷರು
ವಾರ್ಡ್ ಕಮಿಟಿ ಅಧ್ಯಕ್ಷರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ವಾರ್ಡ್ ನಂ-192, ಬೇಗೂರು

**ಪ್ರತಿಗಳು:-**

1) ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ ಮಂಡಿಸಿದೆ.
2) ಉಪ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ ಮಂಡಿಸಿದೆ
3) ಸಹಾಯಕ ಕಂದಾಯ ಅಧಿಕಾರಿ (ಬೇಗೂರು) ಉಪವಿಭಾಗ ರವರ ಅವಗಾಹನೆಗೆ ಮಂಡಿಸಿದೆ
4) ವಾರ್ಡ್ ಸಮಿತಿ ಸದಸ್ಯರು ರವರಿಗೆ ಕಳುಹಿಸಲಾಗಿದೆ.
5) ಕಛೇರಿ ಕಡತಕ್ಕೆ